# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪವಲಯ, ಮಹದೇವಪುರ ವಲಯ, ಬೆಂಗಳೂರು-560036.

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಕೆ.ಆರ್.ಪಿ.ಉವ/ಪಿಆರ್/ /2022-23 ದಿನಾಂಕ: 17-12-2022

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 17-12-2022 ರಂದು ಹೊಸ ದೇವಸಂದ್ರ ವಾರ್ಡ ನಂ: 89 ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ಶ್ರೀ.ಕೇಶವ್, ಸಹಾಯಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು, ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

## "ಸಭೆಯಲ್ಲಿ ಚರ್ಚಿಸಲಾದ ವಿಷಯಗಳು"

| ಕ್ರಮ ಸಂಖ್ಯೆ | ವಿಷಯ | ತೀರ್ಮಾನ |
|---|---|---|
| 1 | ಬೀದಿ ದೀಪಗಳ ನಿರ್ವಹಣೆ ಬಗ್ಗೆ. | ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು, ವೆಂಕಟೇಶ್ವರ ಥಿಯೇಟರ್ ವೃತ್ತದಲ್ಲಿ ಹೈ ಮಾಸ್ಟ್ ಲೈಟ್‌ನ್ನು ಅಳವಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು. ಇದಕ್ಕೆ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರು ಅಳವಡಿಸುವುದಾಗಿ ತಿಳಿಸಿದರು. |
| 2 | ಬ್ಯಾನರ್‌ಗಳನ್ನು ತೆರವುಗೊಳಿಸುವ ಬಗ್ಗೆ. | ದೇವಂದ್ರ ವ್ಯಾಪ್ತಿಯ ಅಯ್ಯಪ್ಪನಗರದಲ್ಲಿ ಅನಧೀಕೃತವಾಗಿ ಬ್ಯಾನರ್‌ಗಳನ್ನು ಹಾಕಿರುವುದು ಕಂಡುಬಂದಿದೆ. ಇದರಿಂದ ಸಮಸ್ಯೆ ಉಂಟಾಗುತ್ತಿದ್ದು, ಕೂಡಲೇ ಬ್ಯಾನರ್‌ಗಳನ್ನು ತೆರವುಗೊಳಿಸವುದಾಗಿ ತಿಳಿಸಿದರು. ಇದಕ್ಕೆ ಹಾಜರಿದ್ದ ಸಹಾಯಕ ಅಭಿಯಂತರರು ಕೂಡಲೇ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |
| 3. | ಟ್ರಾನ್ಸ್ಫಾರ್ಮರ್‌ಗೆ ಸಂಬಂಧಿಸಿದ ದೂರು. | ವೆಂಕಟೇಶ್ವರ ಥಿಯೇಟರ್ ಬಳಿಯಿರುವ ಟ್ರಾನ್ಸ್ಫಾರ್ಮರ್ ಸುತ್ತಲು ಅಶುಚಿತ್ವವಾಗಿದ್ದು, ಇದನ್ನು ತಡೆಯಲು ಟ್ರಾನ್ಸ್ಫಾರ್ಮರ್ ಸುತ್ತಲು ಫೆನ್ಸಿಂಗ್ ಹಾಕಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರರಿಗೆ ತಿಳಿಸಿದರು. ಇದಕ್ಕೆ ಅಧಿಕಾರಿಗಳು ಕೂಡಲೇ ಸಮಸ್ಯೆಗೆ ಪರಿಹಾರ ನೀಡುವುದಾಗಿ ತಿಳಿಸಿದರು.<br><br>ತ್ರಿವೇಣಿನಗರದ ಸ್ಕೂಲ್ ಬಳಿಯಲ್ಲಿರುವ ಟ್ರಾನ್ಸ್ಫಾರ್ಮರ್‌ನ್ನು ವರ್ಗಾಯಿಸುವಂತೆ ಕೇಳಿದರು.ಅಲ್ಲಿ ಶಾಲಾ ಮಕ್ಕಳು ಓಡಾಡುತ್ತಿದ್ದು, ಅಪಾಯವಾಗುವ ಸಾಧ್ಯತೆಗಳಿದ್ದು ಹಾಗಾಗಿ ಕೂಡಲೇ ಟ್ರಾನ್ಸ್ಫಾರ್ಮರ್‌ನ್ನು ವರ್ಗಾಯಿಸುವುದು ಉತ್ತಮ ಎಂದು ತಿಳಿಸಿದರು. ಇದಕ್ಕೆ ಬೆಸ್ಕಾಂ ಅಧಿಕಾರಿಗಳು ಕೂಡಲೇ ಸಮಸ್ಯೆಗೆ ಪರಿಹಾರ ನೀಡುವುದಾಗಿ ತಿಳಿಸಿದರು. |

| | | |
|---|---|---|
| 4. | ರಾಜಕಾಲುವೆಯ ಹೂಳನ್ನು ತೆರವುಗೊಳಿಸುವ ಬಗ್ಗೆ. | ದೇವಸಂದ್ರ ವ್ಯಾಪ್ತಿಯ ಗಂಗಶೆಟ್ಟಿ ಕೆರೆಯ ಪಕ್ಕದಲ್ಲಿರುವ ರಾಜಕಾಲುವೆಯ ಹೂಳನ್ನು ತೆರವುಗೊಳಿಸುವಂತೆ ಕೋರಿದರು. ಇದಕ್ಕೆ ಹಾಜರಿದ್ದ ಸದರಿ ಇಲಾಖೆಯವರು ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |
| 5. | ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಪುನಸ್ಥೇತಗೊಳಿಸುವ ಬಗ್ಗೆ. | ಸಂಜಯನಗರದಲ್ಲಿ ಬಿ.ಡಬ್ಲ್ಯು.ಎಸ್.ಎಸ್.ಬಿ ರವರು ರಸ್ತೆಯನ್ನು ಅಗೆದು ಪುನಸ್ಥೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ ,ವಾಹನ ಚಾಲಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು,ಕೂಡಲೇ ಸಮಸ್ಯೆಯನ್ನು ಪರಿಹರಿಸುವಂತೆ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಹಾಜರಿದ್ದ ಸದರಿ ಇಲಾಖೆಯವರು ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |
| 6. | ಬೆಸ್ಕಾಂ ವತಿಯಿಂದ ಅಗೆದಿರುವ ರಸ್ತೆಗಳನ್ನು ಪುನಸ್ಥೇತಗೊಳಿಸುವ ಬಗ್ಗೆ. | ದೇವಸಂದ್ರ ವ್ಯಾಪ್ತಿಯ ರಾಮಕೃಷ್ಣ ಬಡಾವಣೆಯಲ್ಲಿ ವಿದ್ಯುತ್ ಸರಬರಾಜುಗಾಗಿ ರಸ್ತೆಯನ್ನು ಅಗೆದು ಪುನಸ್ಥೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ, ವಾಹನ ಚಾಲಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು, ಕೂಡಲೇ ಸಮಸ್ಯೆಯನ್ನು ಪರಿಹರಿಸುವಂತೆ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಹಾಜರಿದ್ದ ಸದರಿ ಇಲಾಖೆಯವರು ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |

ವಾರ್ಡ್ ಕಮಿಟಿ ನೋಡಲ್ ಅಧಿಕಾರಿ ಮತ್ತು ಕಾರ್ಯದರ್ಶಿಗಳು, ನೌಕರರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಈ ಮೇಲ್ಕಂಡಂತೆ ತಿಳಿಸಿರುವ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಹಾಗೂ ನಿರ್ಣಯಗಳಂತೆ ದೇವಸಂದ್ರ ವಾರ್ಡ ನಂ: 89 ವ್ಯಾಪ್ತಿಯಲ್ಲಿ ಕೆಲಸ ಕಾರ್ಯಗಳನ್ನು ಆದ್ಯತೆ ಮೇರೆಗೆ ನಿರ್ವಹಿಸಲು ನಿರ್ಣಯಿಸಲಾಯಿತು.

ದೇವಸಂದ್ರ ವಾರ್ಡ ನಂ: 89 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 89

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.